ಕುವೆಂಪು ವಿಶ್ವವಿದ್ಯಾಲಯ

Accredited by NAAC with "A" Grade

ಕಾಲೇಜು ಅಭಿವೃದ್ಧಿ ಪರಿಷತ್ ಕಾರ್ಯಾಲಯ, ಜ್ಞಾನ ಸಹ್ಯಾದ್ರಿ, ಶಂಕರಘಟ್ಟ – 577 451

ದೂರವಾಣಿ : 08282 – 257299 ವೆಬ್‌ಸೈಟ್ : www.kuvempu.ac.in ಇ-ಮೇಲ್ : cdckuvempu@gmail.com

ಸಂಖ್ಯೆ:ಕುವಿ:ಸಿಡಿಸಿ–1: 207 :2026–27 ದಿನಾಂಕ: 16–11–2026

ಪರಿಷ್ಕೃತ ಅಧಿಸೂಚನೆ–1

ವಿಷಯ : 2027–28 ನೇ ಶೈಕ್ಷಣಿಕ ಸಾಲಿನ ಸಂಯೋಜನೆ ಅರ್ಜಿಗಳನ್ನು ಸಲ್ಲಿಸುವ ಕೊನೆಯ ದಿನಾಂಕಗಳನ್ನು ವಿಸ್ತರಿಸಿರುವ ಬಗ್ಗೆ.

ಉಲ್ಲೇಖ: 1) ಈ ಕಛೇರಿ ಅಧಿಸೂಚನೆ ಸಂಖ್ಯೆ:ಕುವಿ:ಸಿಡಿಸಿ–1:167:2026–27:3330 ದಿನಾಂಕ: 23–10–2026

2) ಈ ಕಛೇರಿ ಪರಿಷ್ಕೃತ ಅಧಿಸೂಚನೆ ಸಂಖ್ಯೆ: ಕುವಿ:ಸಿಡಿಸಿ–1:198:2026–27:3540 ದಿನಾಂಕ: 07–11–2026

3) ಮಾನ್ಯ ಕುಲಸಚಿವರ ಅನುಮೋದನೆ ದಿನಾಂಕ: 16–11–2026

2027–28 ನೇ ಶೈಕ್ಷಣಿಕ ಸಾಲಿನ ಸಂಯೋಜನೆಗೆ ಸಂಬಂಧಿಸಿದಂತೆ, ಉಲ್ಲೇಖ (2) ರ ಪರಿಷ್ಕೃತ ಅಧಿಸೂಚನೆಯನುಸಾರ ಅರ್ಜಿಗಳನ್ನು ಆಹ್ವಾನಿಸುವ ಸಂಬಂಧ ದಿನಾಂಕವನ್ನು ವಿಸ್ತರಿಸಲಾಗಿತ್ತು. ಯು.ಯು.ಸಿ.ಎಂ.ಎಸ್ ತಂತ್ರಾಂಶದಲ್ಲಿ ವಿವರವನ್ನು ನಮೂದಿಸಬೇಕಾಗಿದ್ದು ಸದರಿ ತಂತ್ರಾಂಶದಲ್ಲಿ ಕಾಲೇಜುಗಳ ಮಾಹಿತಿಗಳು ಲಭ್ಯವಿರುವುದಿಲ್ಲ ಹಾಗೂ ಪೂರಕ ಮಾಹಿತಿಗಳನ್ನು ನಮೂದಿಸಲು ಕಾಲಾವಕಾಶ ಬೇಕಾಗಿದ್ದು. ಈ ಹಿನ್ನೆಲೆಯಲ್ಲಿ ಅರ್ಜಿ ಸಲ್ಲಿಸಲು ಈ ಕೆಳಕಂಡಂತೆ ದಿನಾಂಕವನ್ನು ವಿಸ್ತರಿಸಿ ಅಧಿಸೂಚನೆಯನ್ನು ಹೊರಡಿಸಲಾಗಿದೆ.

ವಿವರ	ವಿಸ್ತರಣೆ ದಿನಾಂಕ
ದಂಡಶುಲ್ಕವಿಲ್ಲದೆ ಸಂಯೋಜನೆಗೆ ಅರ್ಜಿ ಸಲ್ಲಿಸುವ ದಿನಾಂಕ	20–11–2026
ರೂ. 10,000/– ಗಳ ದಂಡಶುಲ್ಕದೊಂದಿಗೆ ಸಂಯೋಜನೆಗೆ ಅರ್ಜಿ ಸಲ್ಲಿಸುವ ದಿನಾಂಕ	21–11–2026

ಸೂಚನೆ.

- ಇನ್ನುಳಿದಂತೆ ಉಲ್ಲೇಖಿತ (1) ಮತ್ತು (2) ರ ಅಧಿಸೂಚನೆಯಲ್ಲಿ ಯಾವುದೇ ಬದಲಾವಣೆ ಇರುವುದಿಲ್ಲ.
- ನಿಗದಿತ ಸಮಯದೊಳಗೆ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿದ ನಂತರ ಕೂಡಲೇ ಅರ್ಜಿಯನ್ನು ಹಾಗೂ ಎಲ್ಲಾ ದಾಖಲಾತಿಗಳನ್ನು ದ್ವಿಪ್ರತಿಯಲ್ಲಿ ಕಾಲೇಜು ಅಭಿವೃದ್ಧಿ ಪರಿಷತ್ ವಿಭಾಗಕ್ಕೆ ಕಡ್ಡಾಯವಾಗಿ ಸಲ್ಲಿಸುವುದು.
- ಸರ್ಕಾರದ ಆದೇಶಾನುಸಾರ ದಿನಾಂಕ: 21–11–2026 ರಂದು ಸಂಯೋಜನೆ ಪ್ರಕ್ರಿಯೆ ಪ್ರಾರಂಭಿಸಬೇಕಾಗಿರುವುದರಿಂದ ಅರ್ಜಿ ಸಲ್ಲಿಸುವ ದಿನಾಂಕವನ್ನು ವಿಸ್ತರಿಸಲಾಗುವುದಿಲ್ಲ. ಸದರಿ ಅವಧಿಯೊಳಗಾಗಿ ಅರ್ಜಿ ಸಲ್ಲಿಸದಿದಲ್ಲಿ ಮುಂದಿನ ಆಗುಹೋಗುಗಳಿಗೆ ತಾವುಗಳೇ ಹೊಣೆಗಾರರಾಗಿರುತ್ತಿರಿ.
- ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 21–11–2026 ಅನ್ನು ಸರ್ಕಾರವೇ ನಿಗಧಿಗೊಳಿಸಿರುವುದರಿಂದ ದಿನಾಂಕವನ್ನು ವಿಸ್ತರಿಸಲು ವಿಶ್ವವಿದ್ಯಾಲಯಕ್ಕೆ ಅವಕಾಶವಿರದ ಕಾರಣ ಸದರಿ ದಿನಾಂಕದೊಳಗೆ ಅರ್ಜಿ ಸಲ್ಲಿಸುವುದು.

ಕರಡು ಕುಲಸಚಿವರಿಂದ ಅನುಮೋದಿಸಲ್ಪಟ್ಟಿದೆ

16/11/26

ನಿರ್ದೇಶಕರು

ನಿರ್ದೇಶಕರು
ಕಾಲೇಜು ಅಭಿವೃದ್ಧಿ ಪರಿಷತ್
ಕುವೆಂಪು ವಿಶ್ವವಿದ್ಯಾನಿಲಯ,
ಶಂಕರಘಟ್ಟ-577 451

16/11/26

ಗೆ,

ಪ್ರಾಂಶುಪಾಲರು, ಎಲ್ಲಾ ಸಂಯೋಜಿತ ಕಾಲೇಜುಗಳು ಶಿವಮೊಗ್ಗ ಮತ್ತು ಚಿಕ್ಕಮಗಳೂರು ಜಿಲ್ಲೆಗಳು.